# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೮ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩–೨೪ ದಿನಾಂಕ : ೧೩-೦೯–೨೦೨೩

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರು**

.................................................ಬೆಂಗಳೂರು

<u>ಮಾಧ್ಯಮ ಆಹ್ವಾನ ಹಾಗೂ ಪ್ರಕಟಣೆಯ ಕೃಪೆಗಾಗಿ</u>

## ಸೆ.೧೫ ರಂದು ಸಂಜೆ ೫ ಗಂಟೆಗೆ ಪರಿಷತ್ತಿನಲ್ಲಿ ಎಂ. ವಿಶ್ವೇಶ್ವರಯ್ಯರವರ ಜನ್ಮ ದಿನಾಚರಣೆ ಹಾಗೂ ಶ್ರೀ ಪಾಂಡಪ್ಪ ಲಕ್ಷ್ಮಣ ಹೂಗಾರ ದತ್ತಿ ಪ್ರಶಸ್ತಿ ಪ್ರಧಾನ ಸಮಾರಂಭ

ಬೆಂಗಳೂರು:**ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಸೆಪ್ಟೆಂಬರ್ ೧೫ ಶುಕ್ರವಾರ ಸಂಜೆ ೫.೦೦** ಗಂಟೆಗೆ **ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯ** ರವರ **ಜನ್ಮ ದಿನಾಚರಣೆ** ಹಾಗೂ **ಶ್ರೀ ಪಾಂಡಪ್ಪ ಲಕ್ಷ್ಮಣ ಹೂಗಾರ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.**

**ಬೆಂಗಳೂರಿನ ಶ್ರೀ ಜಯಚಾಮರಾಜೇಂದ್ರ ಪಾಲಿಟೆಕ್ನಿಕ್ನ ಪ್ರಾಂಶುಪಾಲರಾದ ಶ್ರೀ ಸದಾಶಿವಮೂರ್ತಿ ಟಿ.ಎಸ್.** ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. **ಬೆಂಗಳೂರು ದಕ್ಷಿಣ ಪಿ.ಡಬ್ಲೂ.ಡಿಯ ಮುಖ್ಯ ಅಭಿಯಂತರರಾದ ಶ್ರೀ ಕೆ. ದುರ್ಗಪ್ಪ** ಅವರು ಪ್ರಶಸ್ತಿ ಪ್ರದಾನಮಾಡಲಿದ್ದಾರೆ. **ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷರಾದ ನಾಡೋಜ ಡಾ. ಮನು ಬಳಿಗಾರ್** ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. **ಹಿರಿಯ ರಂಗಭೂಮಿ ಕಲಾವಿದರಾದ ಶ್ರೀ ಶ್ರೀಪತಿ ಮಂಜನಬೈಲು** ಅವರು ಸರ್ ಎಂ. ವಿಶ್ವೇಶ್ವರಯ್ಯ ರವರ ಕುರಿತ ವಿಶೇಷ ಉಪನ್ಯಾಸ ನೀಡಲಿದ್ದಾರೆ.

**೨೦೨೧ ನೆಯ ಸಾಲಿನ ಹಾಗೂ ೨೦೨೨ ನೆಯ ಸಾಲಿನ ಶ್ರೀ ಪಾಂಡಪ್ಪ ಲಕ್ಷ್ಮಣ ಹೂಗಾರ ದತ್ತಿ ಪ್ರಶಸ್ತಿಯನ್ನು** ಕ್ರಮವಾಗಿ **ಬೆಂಗಳೂರಿನ ಸಂಧ್ಯಾ ದೀಪ ಟ್ರಸ್ಟ್ (ರಿ) ಹಾಗೂ ಧಾರವಾಡ. ಲೇಖಕರು, ಪ್ರಸಾರ ತಜ್ಞರಾಗಿರುವ ಡಾ. ಬಸವರಾಜ ಸಾದರ** ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು **ಕನ್ನಡ ಸಾಹಿತ್ಯ ಪರಿಷತ್ತು ಪ್ರಕಟಣೆಯಲ್ಲಿ** ತಿಳಿಸಿದೆ.

ಈ ಕಾರ್ಯಕ್ರಮಕ್ಕೆ ತಮ್ಮ ಸಂಸ್ಥೆಯ ಪರವಾಗಿ ಪ್ರತಿನಿಧಿಸುವ ವರದಿಗಾರರನ್ನು ಹಾಗೂ ಛಾಯಾಚಿತ್ರಗ್ರಾಹಕರನ್ನು ಕಳಿಸಿ ವರದಿ ಪ್ರಕಟಿಸುವಂತೆ ಕೋರಲಾಗಿದೆ.

**ವಿ.ಸೂ: ಎಲ್ಲರ ಸಮಯಕ್ಕೆ ಗೌರವ ಸಲ್ಲಿಸುತ್ತ ಕಾರ್ಯಕ್ರಮ ನಿಗದಿಯಾದ ಸಮಯಕ್ಕೆ ಸರಿಯಾಗಿ ಆರಂಭಿಸಿ ಸರಿಯಾದ ಸಮಯಕ್ಕೆ ಮುಕ್ತಾಯ ಮಾಡಲಿದ್ದೇವೆ.**

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು,
ಬೆಂಗಳೂರು